# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ದಿನಾಂಕ:09/12/2021ರ ಗುರುವಾರದಂದು ಮಧ್ಯಾಹ್ನ 4.30 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು ವಾರ್ಡ್–145
3. ಆರೋಗ್ಯ ವೈದ್ಯಾಧಿಕಾರಿಗಳು (ಚಿಕ್ಕಪೇಟೆ)
4. ಸಹಾಯಕ ಇಂಜಿನಿಯರ್ (ಬೆಸ್ಕಾಂ)
5. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–145.
6. ಅರಣ್ಯ ಇಲಾಖೆಯ ಅಧಿಕಾರಿಗಳು
7. ವನ್ಯ ಜೀವಿ ಸಂರಕ್ಷರು.
8. ಕಂದಾಯ ಇಲಾಖೆಯ ಅಧಿಕಾರಿಗಳು.
9. ಪಶು ಸಂಗೋಪನಾ ಇಲಾಖೆಯ ಅಧಿಕಾರಿಗಳು.
10. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ತೋಟಗಾರಿಕೆ ಇಲಾಖೆ, ಬಿಬಿಎಂಪಿ ಅಧಿಕಾರಿಗಳು ವಾರ್ಡ್ 145.
2. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
3. ಕಿರಿಯ ಇಂಜಿನಿಯರ್ (ವಿದ್ಯುತ್ ವಿಭಾಗ ಬಿಬಿಎಂಪಿ)
4. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಸಂಚಾರ ವಾರ್ಡ್ 145.
5. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ವಾರ್ಡ್ 145.
6. ಸಹಾಯಕ ಇಂಜಿನಿಯರ್ (BWSSB)
7. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–145.

*********



Scanned by CamScanner

1. ಸಭೆಯಲ್ಲಿ ಅಧ್ಯಕ್ಷರು ಮಾತನಾಡಿ ವಿಲ್ಸನ್‌ಗಾರ್ಡನ್ ವ್ಯಾಪ್ತಿಯಲ್ಲಿ ಅನೇಕ ಕಟ್ಟಡಗಳ ಮಾಲೀಕರು ತಮ್ಮ ಕಟ್ಟಡಗಳಲ್ಲಿ ವಾಣಿಜ್ಯ ವಹಿವಾಟನ್ನು ನಡೆಸುತ್ತಿದ್ದು, ಕಟ್ಟಡದ ಮಾಲೀಕರು ಸದರಿ ಕಟ್ಟಡಗಳಿಗೆ ವಸತಿ ಕಂದಾಯವನ್ನು ಪಾವತಿಸಿರುವುದನ್ನು ಗಮನಿಸಲಾಗಿದ್ದು, ಅಂತಹ ಕಟ್ಟಡಗಳ ಮಾಹಿತಿಯನ್ನು ಕಲೆ ಹಾಕಲು ಕಂದಾಯ ಇಲಾಖೆಯವರಿಗೆ ಸೂಚಿಸಿದರು.

2. ಅಧ್ಯಕ್ಷರು ಮಾತನಾಡಿ ವಿಲ್ಸನ್‌ಗಾರ್ಡನ್ ಏರಿಯಾದಲ್ಲಿ ಹೂವಿನ ಅಂಗಡಿಗಳನ್ನು ಅನಧಿಕೃತವಾಗಿ ನಡೆಸುತ್ತಿರುವುದು ಕಂಡು ಬಂದಿರುತ್ತದೆ. ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲು ಆರೋಗ್ಯ ವೈದ್ಯಾಧಿಕಾರಿಗಳು (ಚಿಕ್ಕಪೇಟೆ) ರವರಿಗೆ ಸೂಚಿಸಿದರು- ಆರೋಗ್ಯ ವೈದ್ಯಾಧಿಕಾರಿಗಳು (ಚಿಕ್ಕಪೇಟೆ) ರವರು ಮಾತನಾಡಿ ಅನಧಿಕೃತ ಅಂಗಡಿಗಳಿಗೆ ನೋಟಿಸ್ ನೀಡುವ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

3. ವಾರ್ಡಿನ ನಾಗರೀಕರು ಮಾತನಾಡಿ ರಾಣಿಪಾರ್ಕ್ ಪಕ್ಕದ 4ನೇ ಅಡ್ಡರಸ್ತೆ ಹಾಗೂ ವಾರ್ಡಿನ ಅನೇಕ ರಸ್ತೆ ಬದಿಗಳಲ್ಲಿ ಮರದ ತುಂಡುಗಳು ಬಿದ್ದಿರುತ್ತವೆ ಹಾಗೂ ಭುವನೇಶ್ವರಿ ಪಾರ್ಕ್‌ನಲ್ಲಿ ಮರದ ಬೇರನ್ನು ತೆಗೆದು ಭೂಮಿಯ ಮೇಲೆ ಬಿದ್ದಿರುವುದನ್ನು ತೆರುವುಗೊಳಿಸಲು ಕೋರಿದರು – ಅಧ್ಯಕ್ಷರು ಮಾತನಾಡಿ ವಾರ್ಡಿನ ವ್ಯಾಪ್ತಿಯಲ್ಲಿರುವ ಎಲ್ಲಾ ಮರದ ತುಂಡುಗಳು ಹಾಗೂ ಪಾರ್ಕ್‌ನಲ್ಲಿರುವ ಬೇರನ್ನು ತೆರವುಗೊಳಿಸಿ ವಾರ್ಡಿನ ವ್ಯಾಪ್ತಿಯಲ್ಲಿರುವ ಮರಗಳಲ್ಲಿ ಒಣಗಿದ ಮರದ ರಂಬೆಗಳನ್ನು ಪರಿಶೀಲಿಸಿ ತೆರವುಗೊಳಿಸಲು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

4. ವಾರ್ಡಿನ ನಾಗರೀಕರು ಮಾತನಾಡಿ ವಾರ್ಡಿನ ವ್ಯಾಪ್ತಿಯಲ್ಲಿ BWSSB ವತಿಯಿಂದ ಮ್ಯಾನ್‌ಹೋಲ್‌ನಿಂದ ತೆಗೆದು ಸಿಲ್ಟ್‌ನ್ನು ರಸ್ತೆ ಮಧ್ಯದಲ್ಲಿ ಹಾಕಿ ಹೋಗುತ್ತಿರುತ್ತಾರೆ. ಇದರಿಂದ ಬರುವ ವಾಸನೆಯಿಂದ ರಸ್ತೆಯಲ್ಲಿ ಓಡಾಡುವ ನಾಗರೀಕರಿಗೆ ಹಾಗೂ ಸ್ಥಳೀಯ ನಿವಾಸಿಗಳಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ ಎಂದು ದೂರಿದರು-ಸದರಿ ವಿಷಯದ ಬಗ್ಗೆ BWSSB ಇಲಾಖೆ ಅಧಿಕಾರಿಗಳು ಮ್ಯಾನ್‌ಹೋಲ್‌ನಿಂದ ತೆಗೆದ ಸಿಲ್ಟ್‌ನ್ನು ರಸ್ತೆಯ ಮಧ್ಯದಲ್ಲಿ ಹಾಕದಂತೆ ಕ್ರಮ ವಹಿಸಲು ಸೂಚಿಸಿದರು.

5. ವಾರ್ಡಿನ ಚಿನ್ನಯ್ಯನಪಾಳ್ಯ ವ್ಯಾಪ್ತಿಯಲ್ಲಿರುವ ಹರಿಲಕ್ಷ್ಮಿ ಥಿಯೇಟರ್ ಮಾಲೀಕರಿಗೆ ಥಿಯೇಟರ್ ಕಟ್ಟಡ ಶಿಥಿಲಾವಸ್ಥೆಯಲ್ಲಿರುವ ಬಗ್ಗೆ ನೋಟಿಸ್ ನೀಡಲು ವಾರ್ಡಿನ ಇಂಜನಿಯರ್ ರವರಿಗೆ ಸೂಚಿಸಿದರು – ವಾರ್ಡಿನ ಅಭಿಯಂತರರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.



Scanned by CamScanner

6. ವಾರ್ಡಿನ ವ್ಯಾಪ್ತಿಯಲ್ಲಿ ಧನ ಮತ್ತು ನಾಯಿಗಳ ಕಾಟ ಹೆಚ್ಚಾಗಿರುತ್ತದೆ ಎಂದು ನಾಗರೀಕರು ದೂರಿದರು–ಅಧ್ಯಕ್ಷರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಪಶು ಸಂಗೋಪನಾ ಇಲಾಖೆಯವರಿಗೆ ಈ ಬಗ್ಗೆ ಕ್ರಮ ವಹಿಸುವುದಾಗಿ ತಿಳಿಸಿದರು.

7. ವಾರ್ಡಿನ ಹೆಚ್. ಸಿದ್ದಯ್ಯ ರಸ್ತೆಯ ಸ್ವತ್ತಿನ ಸಂಖ್ಯೆ:57/10ರ ಶಿಥಿಲಾವಸ್ಥೆಯಲ್ಲಿರುವ ಕಟ್ಟಡದಲ್ಲಿ ಯಾವುದೇ ಅನುಮತಿ ಪಡೆಯದೇ ಮಾಂಸದ ಅಂಗಡಿಯನ್ನು ನಿರ್ವಹಿಸುತ್ತಿರುತ್ತಾರೆ ಎಂದು ದೂರಿದರು. ಸಂಬಂಧಿಸಿದ ವಿಷಯದ ಬಗ್ಗೆ ವಾರ್ಡಿನ ಇಂಜಿನಿಯರ್ ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ಕೈಗೊಳ್ಳಲು ಅಧ್ಯಕ್ಷರು ಸೂಚಿಸಿದರು.

8. ವಾರ್ಡಿನ ವ್ಯಾಪ್ತಿಯಲ್ಲಿ ಹಾವುಗಳು ಹಾಗೂ ಮಂಗಗಳ ಕಾಟ ಹೆಚ್ಚಾಗಿದೆ ಎಂದು ವಾರ್ಡಿನ ನಾಗರೀಕರು ಸಭೆಯಲ್ಲಿ ದೂರಿದರು–ಸದರಿ ವಿಷಯದ ಬಗ್ಗೆ ವನ್ಯ ಜೀವಿ ಸಂರಕ್ಷಣಾ ಇಲಾಖೆಯವರಿಗೆ ಕ್ರಮ ಕೈಗೊಳ್ಳಲು ಅಧ್ಯಕ್ಷರು ಸೂಚಿಸಿದರು ಹಾಗೂ ವಾರ್ಡ್ ವ್ಯಾಪ್ತಿಗೆ ಅಗತ್ಯವಿರುವ ವನ್ಯ ಜೀವಿ ಸಂರಕ್ಷರನ್ನು ನಿಯೋಜಿಸಲು ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned by CamScanner